# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 28/5/2020

# ಪಕ್ಷಾಂತರ ನಿಷೇಧ: ಇಂದು ಸಭೆ

## ವಿಪಕ್ಷಗಳ ನಾಯಕರ ಜತೆ ಸ್ಪೀಕರ್ ಸಭೆ। ಬಿಎಸ್‌ವೈ, ಸಿದ್ದು, ಎಚ್‌ಡಿಕೆ ಭಾಗಿ

ಬೆಂಗಳೂರು: ಪಕ್ಷಾಂತರ ನಿಷೇಧ ಕಾಯ್ದೆ ಸಂಬಂಧ ಸಂವಿಧಾನದ 10ನೇ ಅನುಸೂಚಿಯಲ್ಲಿ ಲಭ್ಯವಿರುವ ಅಧಿಕಾರ, ರಚಿಸಲಾಗಿರುವ ನಿಯಮಗಳ ಮರುಪರಿಶೀಲನೆ ಕುರಿತು ಅಭಿಪ್ರಾಯ ಸಂಗ್ರಹಿಸಲು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ಅಧ್ಯಕ್ಷತೆಯಲ್ಲಿ ಗುರುವಾರ ವಿಧಾನ ಸೌಧದಲ್ಲಿ ಸಭೆ ನಡೆಯಲಿದೆ.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಸ್ಪೀಕರ್, ಪಕ್ಷಾಂತರ ನಿಷೇಧ ಕಾಯ್ದೆ ಸುಧಾರಣೆ ಮಾಡಲು 60 ವರ್ಷಗಳಿಂದ ನಿರಂತರವಾಗಿ ಹಲವಾರು ತಿದ್ದುಪಡಿಗಳು, ಚರ್ಚೆಗಳು, ಮಾರ್ಪಾಡುಗಳು ನಡೆದಿವೆ. ಆದರೂ, ಕೆಲವೊಮ್ಮೆ ಲೋಪದೋಷಗಳು ಆಗುತ್ತಲೇ ಇವೆ. ಹೀಗಾಗಿ, ಇಂತಹದ್ದೊಂದು ಸಭೆ ಆಯೋಜಿಸಲಾಗಿದೆ ಎಂದರು.



ಸಿಎಂ ಯಡಿಯೂರಪ್ಪ, ಡಿಸಿಎಂ ಗೋವಿಂದ ಕಾರಜೋಳ, ಸರ್ಕಾರದ ಮುಖ್ಯ ಸಚೇತಕ ಸುನಿಲ್‌ಕುಮಾರ್, ಸಚಿವರಾದ ಮಾಧುಸ್ವಾಮಿ, ಬಸವರಾಜ ಬೊಮ್ಮಾಯಿ, ಸುರೇಶ್ ಕುಮಾರ್, ಜಗದೀಶ್ ಶೆಟ್ಟರ್, ಶಾಸಕರಾದ ಕೆ.ಜಿ. ಬೋಪಯ್ಯ, ಉಮೇಶ್ ಕತ್ತಿ, ಅರವಿಂದ ಲಿಂಬಾವಳಿ ಬಿಜೆಪಿ ಪ್ರತಿನಿಧಿಗಳಾಗಿ ಭಾಗವಹಿಸಲಿದ್ದಾರೆ. ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಶಾಸಕರಾದ ರಮೇಶ್ ಕುಮಾರ್, ಆರ್.ವಿ. ದೇಶಪಾಂಡೆ, ಕೃಷ್ಣ ಬೈರೇಗೌಡ, ಡಾ.ಜಿ.ಪರಮೇಶ್ವರ್, ಡಾ.ಅಜಯ್ ಧರ್ಮಸಿಂಗ್ ಕಾಂಗ್ರೆಸ್ ಪ್ರತಿನಿಧಿಗಳಾಗಿ, ಜೆಡಿಎಸ್ ಅಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ, ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ, ಶಾಸಕರಾದ ಶಿವಲಿಂಗೇಗೌಡ, ವೆಂಕಟರಾವ್ ನಾಡಗೌಡ, ಎ.ಟಿ.ರಾಮಸ್ವಾಮಿ ಜೆಡಿಎಸ್ ಪ್ರತಿನಿಧಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಲೋಕಸಭೆಯ ಅಧ್ಯಕ್ಷರು, ರಾಜಸ್ಥಾನ, ಒಡಿಶಾ ಹಾಗೂ ಕರ್ನಾಟಕ ಸ್ಪೀಕರ್ ಒಳಗೊಂಡ ಮೂವರ ಅಧ್ಯಯನ ಸಮಿತಿ ರಚನೆಯಾಗಿದ್ದು ಈಗಾಗಲೇ ರಾಜಸ್ಥಾನದಲ್ಲಿ ಒಂದು ಸಭೆ ಮತ್ತು ವಿಚಾರ ಸಂಕಿರಣ ನಡೆದಿದೆ ಎಂದು ಹೇಳಿದರು.

ಸಾರ್ವಜನಿಕರು, ತಜ್ಞರು, ಆಸಕ್ತರು ಪಕ್ಷಾಂತರ ತಿದ್ದುಪಡಿ ಕಾಯ್ದೆ ಸುಧಾರಣೆ ಸಂಬಂಧ ಜೂ.10 ರೊಳಗೆ ಸಲಹೆ, ಸೂಚನೆಯನ್ನು ಕಳುಹಿಸಬಹುದು.